# Bangalore
# Regional News
# 17.02.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಮಾರ್ಚ್ ೭ ರಂದು ರಾಜ್ಯ ಬಜೆಟ್ ಮಂಡನೆಗೆ ದಿನ ನಿಗದಿ; ಮೂರರಂದು ರಾಜ್ಯಪಾಲರಿಂದ ಭಾಷಣ

೨. ರೈತರ ಬೇಡಿಕೆ ಈಡೇರಿಕೆ ಸರ್ಕಾರದ ಮೊದಲ ಆದ್ಯತೆ- ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಅನ್ನ ಭಾಗ್ಯ, ಗೃಹ ಲಕ್ಷ್ಮೀ ಹಣ ಕೆಲವೇ ದಿನಗಳಲ್ಲಿ ಫಲಾನುಭವಿಗಳ ಖಾತೆಗೆ ಜಮೆ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೪. ಕೆಪಿಎಸ್‌ಸಿ ಪರೀಕ್ಷೆಯಲ್ಲಿ ಅಕ್ರಮ ಆರೋಪ ಹಿನ್ನೆಲೆ; ಸರ್ಕಾರದ ವಿರುದ್ಧ ಬಿಜೆಪಿ ನಾಯಕರ ಆಕ್ಷೇಪ

**<><*<><>*><>**

ಮಾರ್ಚ್ ೭ ರಂದು ರಾಜ್ಯ ಸರ್ಕಾರದ ಬಜೆಟ್ ಮಂಡನೆ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರ್ಚ್ ೩ ರಂದು ವಿಧಾನಮಂಡಲ ಅಧಿವೇಶನ ಆರಂಭವಾಗಲಿದ್ದು, ರಾಜ್ಯಪಾಲರು ಭಾಷಣ ಮಾಡಲಿದ್ದಾರೆ. ಮಾರ್ಚ್ ೪ ರಿಂದ ಮೂರು ದಿನ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿ ಪ್ರಸ್ತುತ ವೈಟ್‌ಟಾಪಿಂಗ್ ಯೋಜನೆಯಡಿಯಲ್ಲಿ ೧ ಸಾವಿರ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೫೦ ಕಿಲೋಮೀಟರ್ ಉದ್ದದ ರಸ್ತೆ ಕಾಮಗಾರಿ ನಡೆಯುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕಾಮಗಾರಿಯ ಗುಣಮಟ್ಟ ಪರಿಶೀಲನೆ ನಡೆಸಿ, ಕಾಲಮಿತಿಯೊಳಗೆ ಮುಗಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ. ಮುಂದೆಯೂ ಇಂತಹ ಯೋಜನೆ ಕೈಗೆತ್ತಿಕೊಳ್ಳುವ ಉದ್ದೇಶವಿದೆ ಎಂದು ತಿಳಿಸಿದರು. ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಮೂಲಸೌಕರ್ಯ ಅಭಿವೃದ್ಧಿ ವಿಚಾರದಲ್ಲಿ ಒಳ್ಳೆಯ ಸಲಹೆ ನೀಡಿದರೆ, ಪರಿಗಣಿಸಲಾಗುವುದು ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಅನ್ನಭಾಗ್ಯ ಅಕ್ಕಿಹಣ, ಗೃಹ ಲಕ್ಷ್ಮೀ ಹಣ ಕಳೆದ ಮೂರು ತಿಂಗಳಿನಿಂದ ಗ್ರಾಹಕರ ಖಾತೆಗೆ ಜಮೆಯಾಗದಿರುವ ಕುರಿತು ಪ್ರತಿಕ್ರಿಯಿ ಅವರು, ಕೆಲವೇ ದಿನಗಳಲ್ಲಿ ಹಣ ಹಾಕಲಾಗುವುದು ಎಂದು ತಿಳಿಸಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ (೩೮ ಸೆಕೆಂಡ್‌ಗಳು)

<><*<><>*><>

ರೈತರ ಬೇಡಿಕೆಗಳನ್ನು ಈಡೇರಿಸುವುದು ಸರ್ಕಾರದ ಮೊದಲ ಆದ್ಯತೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ರೈತರ ಮುಖಂಡರ ಜೊತೆ ಆಯ-ವ್ಯಯ ಕುರಿತ ಪೂರ್ವಭಾವಿ ಸಭೆಯಲ್ಲಿ ಈ ಭರವಸೆ ನೀಡಿದ್ದಾರೆ. ಕೃಷಿಯಲ್ಲಿ ಅತಿ ಹೆಚ್ಚು ಉದ್ಯೋಗ ಅವಲಂಬನೆ ಇರುವುದರಿಂದ, ರೈತರ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ, ವಿವಿಧ ಬೇಡಿಕೆ ಈಡೇರಿಸುವಂತೆ ರೈತ ಸಂಘ, ಸರ್ಕಾರಕ್ಕೆ ಮನವಿ ಸಲ್ಲಿಸಿತು. ಇದಕ್ಕೂ ಮೊದಲು ಸುಗ್ರಿವಾಜ್ಞೆ ಮೂಲಕ ಸಣ್ಣ ಹಣಕಾಸು ಸಂಸ್ಥೆಗಳ ಬಲವಂತದ ವಸೂಲಿಗೆ ಕಡಿವಾಣ ಹಾಕಿದ್ದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರೈತ ಮುಖಂಡರು ಅಭಿನಂದಿಸಿದರು.

<><*<><>*><>

ಕರ್ನಾಟಕ ಲೋಕಸೇವಾ ಆಯೋಗದ ಭಾರಿ ಅಕ್ರಮ ಬಯಲಾಗಿದ್ದು, ಉದ್ಯೋಗದಾತ ಸಂಸ್ಥೆಯ ಹುಳುಕು ಸರಿಪಡಿಸುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು ರಾಜ್ಯದಲ್ಲಿ ಆಡಳಿತದಲ್ಲಿ ದಕ್ಷತೆ ತುಂಬಬೇಕಾದ ಅಧಿಕಾರಿಗಳು ಹಾಗೂ ಸಿಬ್ಬಂದಿ ಆಯ್ಕೆ ಮಾಡಬೇಕಾದ ಆಯೋಗದ ವ್ಯವಸ್ಥೆಗೆ ಅಕ್ರಮಗಳ ಸುರುಳಿ ಸುತ್ತಿಕೊಂಡಿರುವಾಗ ರಾಜ್ಯದ ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳಿಗೆ ನ್ಯಾಯ ಸಿಗುವುದಾದರೂ ಹೇಗೆ ಎಂದು ಪ್ರಶ್ನಿಸಿದ್ದಾರೆ. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಂಡು ಅಕ್ರಮವೆಸಗಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಲಕ್ಷಾಂತರ ಪ್ರತಿಭಾವಂತ ಉದ್ಯೋಗಾಕಾಂಕ್ಷಿಗಳಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸಿದ್ದಾರೆ.

ಪ್ರತಿಪಕ್ಷ ನಾಯಕ ಆರ್.ಅಶೋಕ ಅವರು, ರಾಜ್ಯ ಸರ್ಕಾರದ ವಿರುದ್ಧ ಈ ವಿಚಾರದಲ್ಲಿ ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪ್ರಾಮಾಣಿಕ ಅಭ್ಯರ್ಥಿಗಳು ಸರ್ಕಾರಿ ನೌಕರಿ ಪಡೆಯುವ ಆಸೆಯೇ ಇಟ್ಟುಕೊಳ್ಳುವಂತಿಲ್ಲ ಎಂದು ಹೇಳಿದ್ದಾರೆ. ಇನ್ನೊಂದೆಡೆ ಕೆಪಿಎಸ್ ಸಿ ಪರೀಕ್ಷೆಯಲ್ಲಿ ಕನ್ನಡ ವಿದ್ಯಾರ್ಥಿಗಳಿಗೆ ಆಗಿರುವ ಅನ್ಯಾಯ ಸರಿಪಡಿಸಲು ಆಗ್ರಹಿಸಿ ನಾಳೆ ಕರ್ನಾಟಕ ರಕ್ಷಣಾ ವೇದಿಕೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಲು ನಿರ್ಧರಿಸಿದೆ.

<><*<><>*><>

ಬೆಳಗಾವಿಯಲ್ಲಿ ಇಎಸ್‌ಐ ಆಸ್ಪತ್ರೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಟೆಂಡರ್ ಕರೆಯಬೇಕು ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಸ್ಪತ್ರೆ ನೆಲಸಮ ಮಾಡಿ ಅಲ್ಲಿಯೇ ಆಸ್ಪತ್ರೆ ಮಾಡಬೇಕು ಎಂದು ರಾಜ್ಯ ಕಾರ್ಮಿಕ ಇಲಾಖೆ ಒತ್ತಾಯಿಸಿದೆ ಎಂದು ಹೇಳಿದ್ದಾರೆ.

ಸಂತೋಷ್‌ಲಾಡ್, ಸಚಿವ ( ೪೦ ಸೆಕೆಡ್‌ಗಳು)

ಬೆಳಗಾವಿ ದಕ್ಷಿಣ ಕ್ಷೇತ್ರದ ಶಾಸಕ ಅಭಯ ಪಾಟೀಲ್ ಆಸ್ಪತ್ರೆ ಕಟ್ಟಡಕ್ಕೆ ತಮ್ಮ ಕ್ಷೇತ್ರದಲ್ಲಿ ಒಂದು ಜಾಗ ಸೂಚಿಸಿದ್ದು ಈ ಜಾಗ ಕಾರ್ಮಿಕರ ಅನುಕೂಲದ ದೃಷ್ಟಿಯಿಂದ ಸೂಕ್ತ ಅಲ್ಲ ಎಂದು ಅಭಿಪ್ರಾಯಕ್ಕೆ ಬರಲಾಗಿದೆ ಎಂದು ಸಚಿವ ಸಂತೋಷ ಲಾಡ್ ಮಾಹಿತಿ ನೀಡಿದ್ದಾರೆ.

<><*<><>*><>

ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಮತ್ತೊಂದು ಮೈಲಿಗಲ್ಲು ಸಾಧಿಸಿದೆ. ವಿಶ್ವದ ಅತಿದೊಡ್ಡ ೧೦ ಟನ್ ರಾಕೆಟ್ ಇಂಧನ ಮಿಶ್ರಣ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸುವಲ್ಲಿ ಇಸ್ರೋ ಯಶಸ್ವಿಯಾಗಿದೆ. ಇಸ್ರೋದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರ ಹಾಗೂ ಬೆಂಗಳೂರಿನ ಕೇಂದ್ರೀಯ ಉತ್ಪಾದನಾ ತಂತ್ರಜ್ಞಾನ ಸಂಸ್ಥೆ ಸಹಯೋಗದಲ್ಲಿ ಇದನ್ನು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾಗಿದೆ. ಈ ಇಂಧನ ಮಿಶ್ರಣ ಘಟಕ ೧೫೦ ಟನ್ ತೂಕ, ೮.೭ ಮೀಟರ್ ಎತ್ತರ, ೫.೪ ಮೀಟರ್ ಉದ್ದ ಹಾಗೂ ೩.೩ ಮೀಟರ್ ಅಗಲವಿದ್ದು, ಇದನ್ನು ಸ್ಥೂಲ ರಾಕೆಟ್ ಮೋಟಾರ್‌ಗಳಿಗಾಗಿ ಅಭಿವೃದ್ಧಿಪಡಿಸಲಾಗಿದೆ. ರಾಕೆಟ್ ಉಡಾವಣೆಗೆ ಅಗತ್ಯವಾದ ಘನ ಇಂಧನಗಳ ನಿಖರ ಮತ್ತು ಸುರಕ್ಷಿತ ಮಿಶ್ರಣವನ್ನು ಇದು ಖಚಿತಪಡಿಸಲಿದೆ. ಆತ್ಮನಿರ್ಭರ ಭಾರತ ಉಪಕ್ರಮದಡಿ ಬಾಹ್ಯಾಕಾಶ ತಂತ್ರಜ್ಞಾನದಲ್ಲಿ ಭಾರತದ ಸ್ವಾವಲಂಬನೆಯ ಸಂಕೇತವಾಗಿದೆ ಎಂದು ಇಸ್ರೋ ತಿಳಿಸಿದೆ. ಈ ವ್ಯವಸ್ಥೆ ಘನ ಮೋಟಾರು ಉತ್ಪಾದನೆಯಲ್ಲಿ ಸುಧಾರಿತ ಉತ್ಪಾದಕತೆ, ಗುಣಮಟ್ಟ ಮತ್ತು ಸುರಕ್ಷತೆಯನ್ನು ಖಚಿತಪಡಿಸುತ್ತದೆ. ಕಳೆದ ವಾರ ಈ ಘಟಕವನ್ನು ಇಸ್ರೋಗೆ ಹಸ್ತಾಂತರಿಸಲಾಗಿತ್ತು.

<><*<><>*><>

ಉತ್ತರಕನ್ನಡ ಜಿಲ್ಲೆಯ ಹಳಿಯಾಳ ಪಟ್ಟಣ ವ್ಯಾಪ್ತಿಯಲ್ಲಿ ವಸತಿರಹಿತರಿಗೆ ಮನೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ವತಿಯಿಂದ ಆರು ಎಕರೆ ಜಾಗ ಖರೀದಿಸಲು ಚಿಂತನೆ ನಡೆಸಲಾಗಿದೆ ಎಂದು ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ತಿಳಿಸಿದ್ದಾರೆ. ಹಳಿಯಾಳ ಪುರಸಭೆ ಕಚೇರಿ ಆವರಣದಲ್ಲಿ ೧೫ನೇ ಹಣಕಾಸು ಯೋಜನೆಯಡಿ ಖರೀದಿಸಿದ ಐದು ಕಸ ವಿಲೇವಾರಿ ಘಟಕದ ಸ್ವಚ್ಛತಾ ವಾಹನ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಸತಿ ನಿವೇಶನ ಸ್ವಾಧೀನದಿಂದ ಕನಿಷ್ಠ ೨೦೬ ಜನರಿಗೆ ವಸತಿ ಒದಗಿಸಬಹುದು ಎಂದು ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ದೇಶಪಾಂಡೆಯವರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿ ಮಾಡುವ ಸುಮಾರು ೮೭ ಫಲಾನುಭವಿಗಳಿಗೆ ಗೌಂಡಿ ಕಿಟ್ ವಿತರಿಸಿದರು.

<><*<><>*><>

ರೈತರ ಪಂಪ್ ಸೆಟ್ ಗಳಿಗೆ ಹಗಲಿನ ವೇಳೆ ೪ ಗಂಟೆಗಳ ಕಾಲ ಹಾಗೂ ರಾತ್ರಿ ವೇಳೆ ೩ ಗಂಟೆಗಳ ಕಾಲ ಮೂರು ಫೇಸ್ ವಿದ್ಯುತ್ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿನ ಮನೆಗಳಿಗೆ ನಿರಂತರ ಜ್ಯೋತಿ ಮೂಲಕ ದಿನದ ೨೪ ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಬೆಸ್ಕಾಂ ತಿಳಿಸಿದೆ. ಆದರೆ ರಾತ್ರಿ ವೇಳೆ ಕೆಲವರು ಸಿಂಗಲ್ ಫೇಸ್ ಕೃಷಿ

ಪಂಪ್ ಸೆಟ್ ಗಳನ್ನು ನೀರಾವರಿ ಫೀಡರ್ ಗಳ ಮೂಲಕ  ಬಳಸುತ್ತಿರುವುದರಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತಿದೆ.  ಈ ಸಮಯದಲ್ಲಿ ಸಿಂಗಲ್ ಫೇಸ್ ಕೃಷಿ ಪಂಪ್ ಸೆಟ್ ಗಳನ್ನು ಬಳಸದಂತೆ ರೈತರಲ್ಲಿ ಬೆಸ್ಕಾಂ ಮನವಿ ಮಾಡಿದೆ.

<><*<><>*><>

ರಾಷ್ಟ್ರೀಯ ಉಷ್ಣ ವಿದ್ಯುತ್ ನಿಗಮ - ಎನ್‌ಟಿಪಿಸಿ ಎಲೆಕ್ಟ್ರಾನ್ ರಸಪ್ರಶ್ನೆಯ ಪ್ರಾದೇಶಿಕ ಸುತ್ತಿನಲ್ಲಿ ಐಐಟಿ ಮದ್ರಾಸ್ ವಿಜಯಿಯಾಗಿ ಹೊರಹೊಮ್ಮಿದೆ. ಚೆನ್ನೈನ ಎಂಎಂಎ ಸಭಾಂಗಣದಲ್ಲಿ ಇಂದು ನಡೆದ ಎನ್‌ಟಿಪಿಸಿ  ಎಲೆಕ್ಟ್ರಾನ್ ರಸಪ್ರಶ್ನೆಯ ದಕ್ಷಿಣ ಭಾರತದ ಪ್ರಾದೇಶಿಕ ಸುತ್ತಿನಲ್ಲಿ ಐಐಟಿ ಮದ್ರಾಸ್‌ನ ಎರಡು ತಂಡಗಳು ಮೊದಲ ಎರಡು ಸ್ಥಾನಗಳನ್ನು ಗಳಿಸಿವೆ. ಎನ್‌ಟಿಪಿಸಿ ಎಲೆಕ್ಟ್ರಾನ್ ರಸಪ್ರಶ್ನೆಯಲ್ಲಿ ೧೦೫ ತಂಡಗಳು ಭಾಗವಹಿಸಿದ್ದವು. ಅಗ್ರ ಎರಡು ತಂಡಗಳು ನವದೆಹಲಿಯಲ್ಲಿ ಆಯೋಜಿಸಲಾಗುವ ರಾಷ್ಟ್ರೀಯ ಸುತ್ತಿಗೆ ಮುನ್ನಡೆಯಲಿವೆ.  ವಿಜೇತ ತಂಡಕ್ಕೆ ೩೦ ಸಾವಿರ ರೂಪಾಯಿ ನಗದು ಬಹುಮಾನ ನೀಡಲಾಯಿತು. ೨ನೇ ಸ್ಥಾನ ಪಡೆದ ತಂಡಕ್ಕೆ ೨೦ ಸಾವಿರ ಹಾಗೂ ೩ನೇ ಸ್ಥಾನ ಪಡೆದ ತಂಡಗಳಿಗೆ ೧೦ ರೂಪಾಯಿ ನೀಡಲಾಯಿತು. ಉಳಿದ ಮೂರು ತಂಡಗಳಿಗೆ ತಲಾ ೪ ಸಾವಿರ ರೂಪಾಯಿ ವಿತರಿಸಲಾಯಿತು. ೨೦೦೪ ರಿಂದ ಆಯೋಜಿಸಲಾಗುತ್ತಿರುವ ಎನ್‌ಟಿಪಿಸಿ ಎಲೆಕ್ಟ್ರಾನ್ ರಸಪ್ರಶ್ನೆ ಕಾರ್ಯಕ್ರಮ ಬೌದ್ಧಿಕ ಮಟ್ಟವನ್ನು ಪ್ರದರ್ಶಿಸಲು ಒಂದು ಉತ್ತಮ ವೇದಿಕೆಯಾಗಿದೆ.

<><*<><>*><>

ಬಾಗಲಕೋಟೆ ಜಿಲ್ಲೆ, ಮುಧೋಳ ತಾಲೂಕು, ರನ್ನ ಬೆಳಗಲಿಯಲ್ಲಿ ಒಂದು ದಿನ ಹಾಗೂ ಮುಧೋಳ ಪಟ್ಟಣದಲ್ಲಿ ಎರಡು ದಿನ, ರನ್ನ ವೈಭವ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಸಿದ್ಧತೆಗೆ, ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ತಿಳಿಸಿದ್ದಾರೆ. ರನ್ನ ವೈಭವ ಯಶಸ್ವಿ ಹಾಗೂ ಅದ್ದೂರಿಯಾಗಿ ನಡೆಸಲು, ಒಟ್ಟು ೨೪ ಸಮಿತಿ ರಚಿಸಲಾಗಿದೆ. ಮೂರು ದಿನಗಳ ಉತ್ಸವದಲ್ಲಿ ಕವಿ ಚಕ್ರವರ್ತಿ ರನ್ನನ ಸಾಹಿತ್ಯ ಕುರಿತು, ವಿಚಾರಗೋಷ್ಠಿ ಹಾಗೂ ಕವಿಗೋಷ್ಠಿ ನಡೆಯಲಿವೆ ಎಂದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಕೋಲಾರ ತಾಲೂಕಿನ ಒಟ್ಟು ೨೩ ಕೋಟಿ ರೂಪಾಯಿ ವೆಚ್ಚದ ರಸ್ತೆ ಕಾಮಗಾರಿಗಳಿಗೆ ಶಾಸಕ ಕೊತ್ತೂರು ಮಂಜುನಾಥ್ ಹಾಗೂ ವಿಧಾನಪರಿಷತ್ ಸದಸ್ಯ ಅನಿಲ್ ಕುಮಾರ್ ಇಂದು ಗುದ್ದಲಿ ಪೂಜೆ ನೆರವೇರಿಸಿದರು.

೨. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸುಧಾಕರ್ ಇಂದು ಜನತಾ ದರ್ಶನ ನಡೆಸುವ ಮೂಲಕ ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಿ ಅಹವಾಲುಗಳನ್ನು ಸ್ವೀರಿಸಿದರು.

೩. ದಕ್ಷಿಣ ಕನ್ನಡ ಜಿಲ್ಲಾ ಪ್ರವಾಸದಲ್ಲಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮಂಗಳೂರು ನಗರದ ಯೆಯ್ಯಾಡಿ ಕೈಗಾರಿಕಾ ಪ್ರದೇಶದಲ್ಲಿ ಜಿಲ್ಲಾ ಕೇಂದ್ರ ಗ್ರಂಥಾಲಯದ ಕೇಂದ್ರ ಕಚೇರಿಯ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿದರು. ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯರಾದ ಐವಾನ್ ಡಿಸೋಜಾ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>